# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **194** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.09.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಚೀಟಿ ಯೋಜನೆ ರಾಜ್ಯದಲ್ಲಿ ಯಾವಾಗ ಜಾರಿಗೆ ಬರಲಿದೆ; ಇದರಿಂದ ಆಗುವ ಪ್ರಯೋಜನ ಏನು; | ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಚೀಟಿ ಯೋಜನೆಯು ಜನವರಿ 2020 ರಿಂದ ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ. ಇದರಿಂದ ದೇಶದ 26 ರಾಜ್ಯಗಳ ಫಲಾನುಭವಿಗಳು ಯಾವುದೇ ರಾಜ್ಯದಲ್ಲಾದರೂ ಪಡಿತರ ಪಡೆಯಲು ಅವಕಾಶವಿರುತ್ತದೆ. |
| ಆ | ರಾಜ್ಯದಲ್ಲಿ ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆಯಿಂದ ಪಡಿತರ ಪಡೆಯುವ ಫಲಾನುಭವಿಗಳಿಗೆ ಇ-ಕೆವೈಸಿ ವ್ಯವಸ್ಥೆಯು ಇನ್ನೂ ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳು ಇ-ಕೆವೈಸಿ ಪ್ರಯೋಜನೆ ಪಡೆದಿರುತ್ತಾರೆ? | ರಾಜ್ಯದಲ್ಲಿ 80,43,805 ಪಡಿತರ ಕಾರ್ಡ್‌ಗಳ ಫಲಾನುಭವಿಗಳು ಇ-ಕೆವೈಸಿ ವ್ಯವಸ್ಥೆಯ ಪ್ರಯೋಜನ ಪಡೆದಿರುತ್ತಾರೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಪಡಿತರ ಪಡೆಯಲು ಇ-ಕೆವೈಸಿ ವ್ಯವಸ್ಥೆಯನ್ನು ಸ್ಥಗಿತಗೊಳಿಸಲಾಗಿದೆ. |
| ಇ | ಬೀದರ್ ಜಿಲ್ಲೆಯಲ್ಲಿ ಇದುವರೆಗೂ ವಿತರಿಸಲಾದ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್ ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಇದುವರೆಗೂ ವಿತರಿಸಲಾದ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ವಿವರ ಕೆಳಕಂಡಂತಿದೆ: |

| ತಾಲೂಕು | ಬಿ.ಪಿ.ಎಲ್ | ಎ.ಪಿ.ಎಲ್ | ಒಟ್ಟು |
|---|---|---|---|
| ಔರಾದ | 56679 | 6727 | 63406 |
| ಬಸವಕಲ್ಯಾಣ | 71924 | 4326 | 76250 |
| ಭಾಲ್ಕಿ | 61450 | 8719 | 70169 |
| ಬೀದರ | 90391 | 15933 | 106324 |
| ಹುಮನಾಬಾದ | 69854 | 5979 | 75833 |
| **ಒಟ್ಟು** | **350298** | **41684** | **391982** |

| | | |
|---|---|---|
| ಈ | 2019-20ನೇ ಸಾಲಿನಲ್ಲಿ ಪತ್ತೆ ಹಚ್ಚಲಾದ ನಕಲಿ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಈ ಪ್ರಕರಣಗಳಲ್ಲಿ ಎಷ್ಟು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ? | 2018 ರಿಂದ ಇದುವರೆಗೆ ರಾಜ್ಯದಲ್ಲಿ 9301 ಅಂತ್ಯೋದಯ ಪಡಿತರ ಚೀಟಿಗಳನ್ನು ಹಾಗೂ 218889 ಆದ್ಯತಾ ಪಡಿತರ ಚೀಟಿಗಳನ್ನು (ಬಿ.ಪಿ.ಎಲ್) ರದ್ದುಪಡಿಸಲಾಗಿದೆ.<br>ಆದ್ಯತಾ (ಬಿಪಿಎಲ್) ಮತ್ತು ಅಂತ್ಯೋದಯ ಪಡಿತರ ಚೀಟಿಯನ್ನು ಸರ್ಕಾರ ನಿಗದಿಪಡಿಸಿದ ಮಾನದಂಡಗಳ ವಿರುದ್ಧವಾಗಿ ಪಡೆದ ಅನರ್ಹ ಪಡಿತರ ಚೀಟಿ ರದ್ದುಪಡಿಸಿ, ಅವರು ಪಡೆದಿದ್ದ ಆಹಾರ ಪದಾರ್ಥಗಳ ಮೌಲ್ಯವನ್ನು ವಸೂಲಿ ಮಾಡಲಾಗಿದೆ. |

ಆನಾಸ 242 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.